**ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಗಳ ನ್ಯಾಯಾಲಯ, ಹೊಸಪೇಟೆ.**

**ಸಿಸಿ ನಂಬರ್** 2109/2017

**ಸಿ ಡಬ್ಲ್ಯೂ** - 2
**ಪಿ ಡಬ್ಲ್ಯೂ** - 2

| | |
|---|---|
| **ಸಾಕ್ಷಿಯ ಹೆಸರು -** | **ಹನುಮಂತ** |
| **ತಂದೆಯ ಹೆಸರು -** | **ಅಪ್ಪಯ್ಯ** |
| **ವಯಸ್ಸು -** | 45 **ವರ್ಷಗಳು** |
| **ಉದ್ಯೋಗ -** | **ಚಾಲಕ** |
| **ವಾಸಸ್ಥಳ -** | **ಮಲಪನಗುಡಿ, ಹೊಸಪೇಟೆ** |

**ಸಾಕ್ಷಿಯನ್ನು ದಿನಾಂಕಃ** 29-05-2025 **ರಂದು ಪ್ರಾಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎ. ಪಿ. ಪಿ. ಅವರಿಂದ**

ಈಗ ನಾನು ನೋಡುತ್ತಿರುವ ದಾಖಲೆಯಲ್ಲಿನ ಸಹಿ ನನ್ನದೇ ಆಗಿರುತ್ತದೆ. ಸಾಕ್ಷಿ ಕೃತ್ಯ ಸ್ಥಳ ಪಂಚನಾಮೆಯಲ್ಲಿನ ಸಹಿ ನೋಡಿ ಗುರುತಿಸಿರುತ್ತಾರೆ. ಸದರಿ ಪಂಚನಾಮೆಯನ್ನು ನಿಪಿಃ **3** ಎಂದು, ಸಾಕ್ಷಿಯ ಸಹಿಯನ್ನು ನಿಪಿಃ **3** (ಎ) ಎಂದು ಗುರುತಿಸಲಾಯಿತು.

ಸದರಿ ಸಹಿಯನ್ನು ಪೋಲಿಸ ಠಾಣೆಯಲ್ಲಿ **7-8** ವರ್ಷಗಳ ಹಿಂದೆ ಮಾಡಿರುತ್ತೇನೆ. **1** ನೇ ಆರೋಪಿ ಪಿರ್ಯಾದುದಾರ ಮತ್ತು ಇತರರ ಹಣ ತೆಗೆದುಕೊಂಡು ಹೋಗಿದ್ದರಿಂದ ಠಾಣೆಗೆ ದೂರು ನೀಡಲು ಹೋದಾಗ ಸದರಿ ಪಂಚನಾಮೆಗೆ ಸಹಿ ಮಾಡಿರುತ್ತೇನೆ. ನನ್ನೊಂದಿಗೆ ವಿರೇಶ ಎಂಬ ವ್ಯಕ್ತಿ ಹಾಜರು ಇದ್ದ. ನನಗೆ ಪಂಚನಾಮೆಯಲ್ಲಿನ ಅಂಶಗಳ ಬಗ್ಗೆ ಮಾಹಿತಿ ಇರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಮಾನ್ಯ ಎ.ಪಿ.ಪಿ. ಅವರು ಅನುಮತಿ ಕೇಳಿದ್ದು, ಅನುಮತಿಯನ್ನು ನೀಡಲಾಯಿತು.)**

**ಪಾಟೀ ಸವಾಲು ಮಾನ್ಯ ಎ ಪಿ ಪಿ ಅವರಿಂದಃ**

ಸದರಿ ಪಂಚನಾಮೆಯನ್ನು ದಿಃ 28-06-2016 ರಂದು ಬೆಳಿಗ್ಗೆ 10.30 ರಿಂದ 11.30 ರವರೆಗೆ ಮಾಡಲಾಗಿತ್ತು ಅಂದರೆ ಸರಿ. ಸ್ಥಳದಲ್ಲಿ ಚಾಸಾ -1, 3 ಮತ್ತು ಪೋಲಿಸರು ಇದ್ದರು ಅಂದರೆ ಸರಿ. ಪಂಚನಾಮೆಯನ್ನು ಪಿ ಕೆ ವಿ ಪ್ಲಾಜಾದ 1 ನೇ ಮಹಡಿಯಲ್ಲಿ ಬಜಾಜ್ ಪೈನಾನ್ಸ ಕಚೇರಿಯಲ್ಲಿ ಮಾಡಲಾಗಿದೆ ಅಂದರೆ ಸರಿಯಲ್ಲ. ಸದರಿ ಪಂಚನಾಮೆಯನ್ನು ನನ್ನ ಸಮಕ್ಷಮ ಮಾಡಲಾಗಿದ್ದರೂ ಸಹ ಇಲ್ಲ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಅಂದರೆ ಸರಿಯಲ್ಲ.

**ಪಾಟೀ ಸವಾಲು ಆರೋಪಿ ಪರ ಶ್ರೀ ಹೆಚ್ ಆರ್., ವಕೀಲರಿಂದಃ** ಇಲ್ಲಾ.

ಮರುವಿಚಾರಣೆ ಇಲ್ಲ.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ. ಹೆ. ಕೇ. ಸರಿ ಇದೆ.

ಪ್ರಧಾನ ದಿವಾಣಿ ನ್ಯಾಯಾಧೀಶರು
ಹಾಗೂ ಜೆ.ಎಂ.ಎಫ್.ಸಿ., ಹೊಸಪೇಟೆ.